# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ -175 ಅಶೋಕ ಸ್ತಂಭ ವಾರ್ಡ್ ಸಭೆಯ ನಡವಳಿ

ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಅಶೋಕ ಸ್ತಂಭ ವಾರ್ಡ್-175 ರಲ್ಲಿ ವಾರ್ಡ್ ಸಭೆಯನ್ನು ಶ್ರೀಮತಿ. ವರಲಕ್ಷ್ಮಮ್ಮ ಎಲ್. ನೋಡಲ್ ಅಧಿಕಾರಿ ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರ ಅಪ್ಪಣೆಮೇರೆಗೆ ದಿನಾಂಕ:07/01/2023 ಶನಿವಾರದಂದು ಮಧ್ಯಾಹ್ನ 3.00 ಗಂಟೆಗೆ ವಾರ್ಡ್ ಕಮಿಟಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಸದಸ್ಯರಿಗೆ ಆಹ್ವಾನ ನೀಡಿದ್ದು, ಸಭೆಯನ್ನು ನಡೆಸಲಾಯಿತು.

ಹಾಜರಿದ್ದವರು:-

1. ಶ್ರೀಮತಿ. ವರಲಕ್ಷ್ಮಮ್ಮ ಎಲ್. ನೋಡಲ್ ಅಧಿಕಾರಿ.
2. ಶ್ರೀ. ಧರ್ಮಸಿಂಗ್ ಚತ್ರುನಾಯಕ್ ವಾರ್ಡ್ ಇಂಜಿನಿಯರ್.
3. ಶ್ರೀ. ಜಿ.ಟಿ. ಬೊಮ್ಮೇಗೌಡ, ಕೆಲಸ ಪರಿವೀಕ್ಷಕರು ವಾರ್ಡ್-175.
4. ಶ್ರೀ. ರವಿಂದ್ರ ಹಿಜೇರಿ, ಹಿರಿಯ ಆರೋಗ್ಯ ಪರಿವೀಕ್ಷಕರು.
5. ಶ್ರೀ. ವಿಜಯಕುಮಾರ್, ಕಿರಿಯ ಆರೋಗ್ಯ ಪರಿವೀಕ್ಷಕರು.
6. ಶ್ರೀ. ಮಕ್ಸೂದ್ ಖಾನ್, ತೋಟಗಾರಿಕೆ ಮೇಸ್ತ್ರಿ
7. ಶ್ರೀ. ಎಂ. ಚನ್ನೇಗೌಡ, ಎ.ಎಸ್.ಐ, ಬಸವನಗುಡಿ ಸಂಚಾರ ಪೊಲೀಸ್ ಠಾಣೆ.
8. ಶ್ರೀ. ರಾಜು ಟಿ., ಕಂದಾಯ ಪರಿವೀಕ್ಷಕರು ವಾರ್ಡ್ 175.
9. ಶ್ರೀ. ಹನುಮಂತಪ್ಪ, ಜಲ ಪರಿವೀಕ್ಷಕರು ಬೆಂ.ನೀ.ಸ ಮತ್ತು ಒ.ಮಂ.
10. ಶ್ರೀ. ಎ.ಟಿ. ಕುಮಾರ್, ಎ.ಎಸ್.ಐ ಬಸವನಗುಡಿ ಪೊಲೀಸ್ ಠಾಣೆ.
11. ಶ್ರೀ. ಸಿದ್ದರಾಮಯ್ಯ, ಎ.ಎಸ್.ಐ ಸಿದ್ದಾಪುರ ಪೊಲೀಸ್ ಠಾಣೆ.
12. ವಾರ್ಡ್ ಸಂಖ್ಯೆ: 175ರ ಸ್ಥಳೀಯರಾದ ಡಾ॥ ಆರ್. ರಘುನಾಥ್, ಶ್ರೀ. ಆನಂದ್ ಶ್ರೀ. ಸಿ.ಎನ್.ಕುಮಾರ್, ಶ್ರೀ. ರಂಗನಾಥ್.

*********

1. ವಾರ್ಡ್-175(153) ಅಶೋಕ ಸ್ತಂಭ ವಾರ್ಡ್‌ನ ಸಾರ್ವಜನಿಕ ಕುಂದು ಕೊರತೆಗಳ ಬಗ್ಗೆ ಚರ್ಚಿಸುವ ಸಂಬಂಧ ದಿನಾಂಕ:07/01/2023 ಶನಿವಾರದಂದು ಬೆಳಗ್ಗೆ 11.00 ಗಂಟೆಗೆ ನಿಗಧಿತ ಸಮಯಕ್ಕೆ ಸಭೆಯನ್ನು ಪ್ರಾರಂಭಿಸಲಾಯಿತು.



Scanned with CamScanner

2. ವಾರ್ಡಿನ ಸ್ಥಳೀಯರಾದ ಡಾ॥ ರಘುನಾಥ್ ರವರು ಮಾತನಾಡಿ ಜಯನಗರ 1ನೇ ಬ್ಲಾಕ್ ಪ್ರದೇಶದಲ್ಲಿ ಒಳಚರಂಡಿ ಮಂಡಳಿಯವರು ಬಂದು ನೀರಿನ ಮೀಟರ್ ಬದಲಿಸುವಂತೆ ಒತ್ತಾಯ ಮಾಡುತ್ತಿರುತ್ತಾರೆ. ಹಾಗೂ ಕಳುವು ಮಾಡುತ್ತಿರುತ್ತಾರೆ ಎಂದು ದೂರಿದರು. ಈ ಬಗ್ಗೆ ಈಗಾಗಲೇ ಸಿದ್ಧಾಪುರ ಪೋಲೀಸ್ ಠಾಣೆಯಲ್ಲಿ ದೂರು ದಾಖಲಿಸಿರುವುದಾಗಿ ತಿಳಿಸಿರುತ್ತಾರೆ. ನೋಡಲ್ ಅಧಿಕಾರಿಯವರು ಮಾತನಾಡಿ ಸಂಬಂಧಪಟ್ಟ ಇಲಾಖೆಯವರಿಗೆ ಈ ಬಗ್ಗೆ ಕ್ರಮ ವಹಿಸಲು ಸೂಚನೆ ನೀಡುವುದಾಗಿ ಸಭೆಯಲ್ಲಿ ತಿಳಿಸಿದರು.

3. ವಾರ್ಡಿನ ಸ್ಥಳೀಯರಾದ ಶ್ರೀ. ಸಿ.ಎನ್. ಕುಮಾರ್ ರವರು ಮಾತನಾಡಿ ಜಯನಗರ 1ನೇ ಬ್ಲಾಕ್‌ನ 4ನೇ ಅಡ್ಡರಸ್ತೆಯಲ್ಲಿ ಅಡ್ಡಾದಿಡ್ಡಿಯಾಗಿ ವಾಹನ ನಿಲುಗಡೆ ಮಾಡಿದ್ದು, ಇದರಿಂದ ತೊಂದರೆಯಾಗಿರುವುದಾಗಿ ತಿಳಿಸಿದರು. ನೋಡಲ್ ಅಧಿಕಾರಿಯವರು ಮಾತನಾಡಿ ಈ ಬಗ್ಗೆ ಕ್ರಮ ವಹಿಸುವುದಾಗಿ ಸಭೆಯಲ್ಲಿ ತಿಳಿಸಿದರು.

4. ವಾರ್ಡಿನ ಸ್ಥಳೀಯರಾದ ಡಾ॥ ರಘುನಾಥ್ ರವರು ಮಾತನಾಡಿ ಜಯನಗರ 1ನೇ ಬ್ಲಾಕ್ ಪ್ರದೇಶದಲ್ಲಿ ಹಸಿ ಕಸ ಮತ್ತು ಒಣ ಕಸ ಸಮರ್ಪಕವಾಗಿ ವಿಂಗಡಣೆ ಆಗುತ್ತಿಲ್ಲವೆಂದು ಸಭೆಯಲ್ಲಿ ತಿಳಿಸಿದರು. ಸಭೆಯಲ್ಲಿ ಹಾಜರಿದ್ದ ಹಿರಿಯ ಹಾಗೂ ಕಿರಿಯ ಆರೋಗ್ಯ ಪರಿವೀಕ್ಷಕರು ಈ ಬಗ್ಗೆ ಕ್ರಮ ವಹಿಸುವುದಾಗಿ ಸಭೆಯಲ್ಲಿ ತಿಳಿಸಿದರು.

5. ವಾರ್ಡಿನ ಸ್ಥಳೀಯರಾದ ಶ್ರೀ. ಆನಂದ್ ರವರು ಮಾತನಾಡಿ ಮೌಂಟೆನ್ ರಸ್ತೆಯಲ್ಲಿ ಬೆಸ್ಕಾಂನ ಕೇಬಲ್ ನೇತಾಡುತ್ತಿದ್ದು, ಈ ಬಗ್ಗೆ ಅಸಮಾಧಾನ ವ್ಯಕ್ತ ಪಡಿಸಿದರು. ಸಭೆಯಲ್ಲಿ ಬೆಸ್ಕಾಂ ಇಲಾಖೆಯವರು ಗೈರುಹಾಜರಾಗಿದ್ದು, ಈ ಬಗ್ಗೆ ಕ್ರಮ ವಹಿಸಲು ಪತ್ರ ಬರೆಯುವಂತೆ ನೋಡಲ್ ಅಧಿಕಾರಿಯವರು ಸೂಚನೆ ನೀಡಿದರು.



Scanned with CamScanner

6. ವಾರ್ಡಿನ ಸ್ಥಳೀಯರಾದ ಡಾ|| ರಘುನಾಥ್ ರವರು ಮಾತನಾಡಿ ಮಾರ್ಷಲ್‌ಗಳು ಕಸ ವಿಲೇವಾರಿ ವಾಹನಗಳೊಂದಿಗೆ ತೆರಳಿ ಕ್ರಮವಹಿಸುವುದು ಹಾಗೂ ಪ್ಲಾಸ್ಟಿಕ್ ಗುಣಮಟ್ಟದ ಬಗ್ಗೆ ಪರಿಶೀಲಿಸಲು ಸಭೆಯಲ್ಲಿ ತಿಳಿಸಿದರು. ನೋಡಲ್ ಅಧಿಕಾರಿಯವರು ಮಾತನಾಡಿ ಈ ಬಗ್ಗೆ ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ, ಚಿಕ್ಕಪೇಟೆ ವಿಭಾಗ ರವರಿಗೆ ಪತ್ರ ಬರೆಯಲು ತಿಳಿಸಿದರು.

ಮೇಲಿನ ಎಲ್ಲಾ ಅಂಶಗಳನ್ನು ಕ್ರಮಬದ್ಧವಾಗಿ ನಿರ್ವಹಿಸಲು ಹಾಜರಿದ್ದ ಎಲ್ಲಾ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರಿಗೆ ತಿಳಿಸಿ ಮುಂದಿನ ಸಭೆಗೆ ಕಡ್ಡಾಯವಾಗಿ ಗೈರುಹಾಜರಾಗಿರುವ ಇತರೆ ಇಲಾಖೆಯವರು ಪಾಲ್ಗೊಂಡು ಮಾನ್ಯ ಆಯುಕ್ತರು (ಬಿಬಿಎಂಪಿ) ರವರು ವಹಿಸಿರುವ ಜವಾಬ್ದಾರಿಯನ್ನು ಯಶಸ್ವಿಯಾಗಿ ನಿರ್ವಹಿಸಲು ಎಲ್ಲರೂ ಸಹಕರಿಸಬೇಕೆಂದು ತಿಳಿಸುತ್ತಾ ಸಭೆ ಮುಕ್ತಾಯಗೊಳಿಸಲಾಯಿತು.

(ಧರ್ಮ[illegible] ನಾಯಕ್)
ಕಾರ್ಯದರ್ಶಿ
ವಾರ್ಡ್-175 ಅಶೋಕ ಸ್ತಂಭ

(ವಿಜಯಲಕ್ಷ್ಮಮ್ಮ ಎಲ್)
ನೋಡಲ್ ಅಧಿಕಾರಿ
ವಾರ್ಡ್-175 ಅಶೋಕ ಸ್ತಂಭ



Scanned with CamScanner